ವಸತಿ ಶಾಲೆಗಳ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ):-

57 (53) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇಲಾಖಾ ವ್ಯಾಪ್ತಿಯಲ್ಲಿನ ಮೊರಾರ್ಜಿ ವಸತಿ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಎರಡು ವರ್ಷ ಸೇವಾವಧಿ ಪೂರೈಸಿ ಖಾಯಂ ಪೂರ್ವ ಸೇವಾವಧಿ ಪೂರ್ಣಗೊಂಡಿದ್ದರೂ ಇವರ ಪ್ರೊಬೆಷನರಿ ಅವಧಿ ಘೋಷಣೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದ್ದಲ್ಲಿ, ಇದರ ಪ್ರೊಬೆಷನರಿ ಅವಧಿ ಘೋಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) 2016 ಜೂನ್‌ನಲ್ಲಿ ಕುಮಾರ್ ನಾಯಕ್ ವರದಿಯಂತೆ ಸರ್ಕಾರ ಪ್ರಾಥಮಿಕ, ಪ್ರೌಢ, ಪದವಿಪೂರ್ವ ಕಾಲೇಜುಗಳ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡಿದಂತೆ ಸಮಾಜ ಕಲ್ಯಾಣ ಇಲಾಖೆಯ ಶಿಕ್ಷಕರಿಗೆ ವಿಶೇಷ ಭತ್ಯೆಯನ್ನು ನೀಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?